# ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 06 ಡಿಎಆರ್ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು-1, ದಿನಾಂಕ:15/06/2019.

## ಸುತ್ತೋಲೆ

ಸಾರ್ವಜನಿಕ ಶಿಕ್ಷಣ ಇಲಾಖೆಯು ಅಂತ್ಯಂತ ಮಹತ್ವದ ಹಾಗೂ ವಿಸ್ತಾರವಾದ ಇಲಾಖೆಯಾಗಿದ್ದು, ಈ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಗ್ರೂಪ್-ಎ ಮತ್ತು ಗ್ರೂಪ್-ಬಿ ವೃಂದದ ಅಧಿಕಾರಿಗಳು ಹಾಗೂ ಎಲ್ಲಾ ವೃಂದದ ಬೋಧಕ / ಬೋಧಕೇತರ ನೌಕರರ ಸಂಖ್ಯೆ ಹೆಚ್ಚಾಗಿರುತ್ತದೆ.

ಕರ್ನಾಟಕ ಸಿವಿಲ್ ಸೇವಾ ನಿಯಮಗಳಡಿಯಲ್ಲಿ ಕೆಳಕಂಡ ಸೇವಾ ಸೌಲಭ್ಯಗಳನ್ನು ಎಲ್ಲಾ ವೃಂದದ ಅಧಿಕಾರಿಗಳು ಮತ್ತು ಬೋಧಕ / ಬೋಧಕೇತರ ನೌಕರರಿಗೆ ಒದಗಿಸಬೇಕಿರುತ್ತದೆ. ಸದರಿ ಸೌಲಭ್ಯಗಳನ್ನು ಇಲಾಖೆಯ ಅಧಿಕಾರಿ/ನೌಕರರ ವೃಂದದವರು ಏಕ ಕಾಲದಲ್ಲಿ ಪಡೆಯಲು ಇಚ್ಛಿಸುವ ಸಂದರ್ಭಗಳು ಇದ್ದು, ಈ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಲು ಸಾಧ್ಯವಾಗದೇ ಇರುವುದು ಕಂಡು ಬಂದಿರುತ್ತದೆ.

ವಿವಿಧ ಹಂತಗಳಲ್ಲಿ ನಿಯಂತ್ರಣಾಧಿಕಾರಿಗಳ ಮುಖಾಂತರ ಇಲಾಖಾ ಮುಖ್ಯಸ್ಥರುಗಳಿಗೆ ಹಾಗೂ ಕೆಲವು ಸೌಲಭ್ಯಗಳನ್ನು ಪಡೆಯಲು ಸರ್ಕಾರಕ್ಕೆ ಸಲ್ಲಿಸಿ ಅನುಮತಿ ಪಡೆಯಬೇಕಾಗಿರುತ್ತದೆ. ಈ ಹಂತಗಳಲ್ಲಿ ವಿವಿಧ ಕಾರಣಗಳಿಂದ ವಿಳಂಬವಾಗಬಹುದು. ಇದರಿಂದ ಅಧಿಕಾರಿಗಳಿಗೆ ಆಡಳಿತ ಮತ್ತು ಕಛೇರಿ ಸಿಬ್ಬಂದಿ ವರ್ಗದವರಿಗೆ ದೈನಂದಿನ ಕಾರ್ಯಗಳ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವ ಸಾಧ್ಯತೆಗಳಿರುತ್ತದೆ. ಇಂತಹ ಪ್ರಮುಖ ಸಮಸ್ಯೆಗಳಿಗೆ ಪರಿಹಾರೋಪಾಯವಾಗಿ ವಿವಿಧ ಸೇವೆಗಳನ್ನು ನಿಗಧಿತ ಅವಧಿಯೊಳಗೆ, ತ್ವರಿತವಾಗಿ ಒದಗಿಸಲು ಹಾಗೂ ಸೌಲಭ್ಯ ಒದಗಿಸುವ ವ್ಯವಸ್ಥೆಯನ್ನು ಸರಳೀಕರಣಗೊಳಿಸಲು ಮತ್ತು ಸಿಬ್ಬಂದಿಗಳ ದಕ್ಷತೆ ಮತ್ತು ಕಾರ್ಯ ತತ್ಪರತೆಯಲ್ಲಿ ಉತ್ಸಾಹ ಹೆಚ್ಚಿಸಲು ಕೆಳಕಂಡ ಸೇವೆಗಳನ್ನು ಆನ್ ಲೈನ್ ತಂತ್ರಾಂಶದ ಮುಖಾಂತರ ಒದಗಿಸಲು ಇಲಾಖೆ ನಿರ್ಣಯಿಸಿದೆ. ಸರ್ಕಾರದ ಆದೇಶದಂತೆ ಈಗಾಗಲೇ ಹಲವು ಸೇವೆಗಳು ಸಕಾಲಕ್ಕೆ ಒಳಪಟ್ಟಿರುತ್ತವೆ. ಹಾಗೂ ಮಾಹಿತಿ ಹಕ್ಕು ಅಧಿನಿಯಮ 2005 ಜಾರಿಯಲ್ಲಿರುತ್ತದೆ. ಇಲಾಖೆಯ ಆಡಳಿತದಲ್ಲಿ ಪಾರದರ್ಶಕತೆ ಮತ್ತು ಮಿತವ್ಯಯ ಸಾಧಿಸಿದಂತಾಗುತ್ತವೆ. ಈ ಕಾರಣಗಳಿಂದ ಕೆಳಕಂಡ ಸೇವೆಗಳನ್ನು ಆನ್ ಲೈನ್ ತಂತ್ರಾಂಶದಲ್ಲಿ ಅಳವಡಿಸುವುದು ಅತ್ಯಗತ್ಯವಾಗಿರುತ್ತದೆ. ಅದರಂತೆ ಆದೇಶಗಳನ್ನು http://www.sts.karnataka. gov.in ಹೊರಡಿಸಲಾಗಿದೆ.

1. ವಿವಿಧ ರಜಾ ಸೌಲಭ್ಯಗಳು
2. ಪಾಸ್ ಪೋರ್ಟ್ ಪಡೆಯಲು ಹಾಗೂ ವಿದೇಶ ಪ್ರವಾಸಕ್ಕೆ ನಿರಾಕ್ಷೇಪಣಾ ಪತ್ರ
3. ಶಿಸ್ತು ಪ್ರಕರಣಗಳು
4. ಪ್ರಭಾರ ಭತ್ಯೆ ಮಂಜೂರಾತಿ
5. ಅಧಿಕಾರಿಗಳ ಪ್ರವಾಸ ದಿನಚರಿ ನಿರ್ವಹಣೆ / ಅನುಮೋದನೆ.
6. ಅರ್ಹತಾದಾಯಕ ಸೇವೆ ಸೇರ್ಪಡೆ ಅನುಮೋದನೆ.
7. ಕಾಲಮಿತಿ ವೇತನ ಬಡ್ತಿ/ಸ್ವಯಂ ಚಾಲಿತ ವೇತನ ಬಡ್ತಿ / 20,25,30 ವರ್ಷಗಳ ಹೆಚ್ಚುವರಿ ಬಡ್ತಿ/ಸ್ಥಗಿತ ವೇತನ ಬಡ್ತಿ ಮಂಜೂರಾತಿ.
8. ಚರಾಸ್ತಿ ಮತ್ತು ಸ್ಥಿರಾಸ್ತಿ ಖರೀದಿಸಲು ಅನುಮತಿ
9. ಉನ್ನತ ವ್ಯಾಸಂಗಕ್ಕೆ ಅನುಮತಿ

ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958, ಕರ್ನಾಟಕ ಸಿವಿಲ್ ಸೇವೆ (ಸಿಸಿಎ) ನಿಯಮಗಳು 1957, ಕರ್ನಾಟಕ ಸಿವಿಲ್ ಸೇವೆ (ನಡತೆ) ನಿಯಮಗಳು 1966 ರಡಿಯಲ್ಲಿನ ನಿಯಮಗಳು, ತಿದ್ದುಪಡಿಗಳು, ಆದೇಶಗಳು, ಅನುಮತಿ ಪ್ರಾಧಿಕಾರಿಗಳ ಸಂಬಂಧದ ಆದೇಶಗಳು ಹಾಗೂ ಆಗಿಂದಾಗ್ಗೆ ಹೊರಡಿಸುವ ಆದೇಶಗಳ ಪರಿದಿಗೆ ಒಳಪಟ್ಟಂತೆ ಆನ್ ಲೈನ್ ತಂತ್ರಾಂಶ ಸೃಜಿಸಲಾಗಿದೆ ಹಾಗೂ ಅನುಷ್ಠಾನಗೊಳಿಸಲಾಗಿದೆ.

ಈ ಎಲ್ಲಾ ಸೌಲಭ್ಯಗಳನ್ನು ದಿನಾಂಕ:01/05/2019ರಿಂದ ಜಾರಿಗೆ ಬರುವಂತೆ ಆನ್ ಲೈನ್ ನಿರ್ವಹಿಸಿ ಇತ್ಯರ್ಥಪಡಿಸುವುದು ಕಡ್ಡಾಯವಾಗಿರುತ್ತದೆ. ತಂತ್ರಾಂಶದಲ್ಲಿ ಮಾಹಿತಿ ಅಪ್-ಲೋಡ್ ಮಾಡುವ / ಅನುಮತಿ ನೀಡುವ ಅಧಿಕಾರಿಗಳ ಡಿಜಿಟಲ್ ಸಹಿ ಅಳವಡಿಕೆಯಾಗುವವರೆಗೆ ಅಧಿಕಾರಿಗಳೇ ಸ್ವತಃ ಸಹಿ ಮಾಡಿ (manual) ಆನ್ ಲೈನ್ ಮೂಲಕ ಸಲ್ಲಿಸಲು ತಿಳಿಸಿದೆ. ಈ ಬಗ್ಗೆ ಪ್ರಸ್ತಾಪಿತ ಆನ್ ಲೈನ್ ಸೇವೆಗಳಿಗೆ ಸಂಬಂಧಿಸಿದಂತೆ ಕೈಪಿಡಿಯನ್ನು ಮಾರ್ಗಸೂಚಿಗಳನ್ನು ಹಾಗೂ ಆದೇಶಗಳನ್ನು ಇಲಾಖೆಯ ವೆಬ್ ಸೈಟ್ ವಿಳಾಸ http://www.sts.karnataka.gov.in ರಲ್ಲಿ ಪ್ರಕಟಿಸಲಾಗಿದೆ.

ಸದರಿ ಆನ್ ಲೈನ್ ಸೇವೆಗೆ ಭಾಗೀದಾರ ಇಲಾಖೆಗಳು ನಿಮ್ಮ ಇಲಾಖೆಯ ಲಾಗಿನ್ ಮೂಲಕ ಆನ್ ಲೈನ್ ನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಗೆ ಸಂಬಂಧಪಟ್ಟ ಮೇಲ್ಕಂಡ ಸೇವೆಗಳನ್ನು ಇಲಾಖೆಯ ಅಧಿಕಾರಿ/ನೌಕರರ ವೃಂದದವರು ತಮ್ಮ ಹಂತದಲ್ಲಿ ಪಡೆಯಲು ಆನ್ ಲೈನ್ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಬೇಕಾಗಿ ಕೋರಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಡಿ. ನಾಗೇಂದ್ರ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಆಡಳಿತ)

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು(ಎ ಮತ್ತು ಇ), ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಕರ್ನಾಟಕ, ಬೆಂಗಳೂರು-1.
2. ಮಾನ್ಯ ಲೋಕಾಯುಕ್ತರು/ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಕಛೇರಿ, ಅಂಬೇಡ್ಕರ್ ವೀಧಿ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ,
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ,
6. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ಇಲಾಖೆ,
7. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
9. ಪ್ರಾದೇಶಿಕ ಪಾಸ್ ಪೋರ್ಟ್ ಅಧಿಕಾರಿಗಳು, ಪಾಸ್ ಪೋರ್ಟ್ ಕಛೇರಿ, ಕೋರಮಂಗಲ, ಬೆಂಗಳೂರು
10. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರ್ಗಿ.

11. ನಿರ್ದೇಶಕರುಗಳು/ಜಂಟಿ ನಿರ್ದೇಶಕರುಗಳು/ಪ್ರಾಂಶುಪಾಲರು, ಸಿ.ಟಿ.ಇ./ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕರು(ಅಭಿವೃದ್ಧಿ), ಡಯಟ್, ಜಿಲ್ಲಾ ಉಪನಿರ್ದೇಶಕರು(ಆಡಳಿತ), ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಇಲಾಖೆಯ ಇತರೆ ಅಧಿಕಾರಿ / ಸಿಬ್ಬಂದಿ ವರ್ಗದವರಿಗೆ **(ಆಯುಕ್ತರ ಮುಖಾಂತರ )**

12. ಶಾಖಾ ರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.

<u>ಪ್ರತಿ:-</u>

(1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ವಿಶೇಷಾಧಿಕಾರಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ,

(2) ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ,